ಆ) ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಯಾವುದೇ ಆಹಾರ ಸಹಾಯಧನವನ್ನು ಬಿಡುಗಡೆ ಮಾಡಿರುವುದಿಲ್ಲ. ಆದರೆ, ಕೇಂದ್ರ ಸರ್ಕಾರವು ಸಬ್ಸಿಡಿ ದರದಲ್ಲಿ ಆಹಾರಧಾನ್ಯಗಳನ್ನು ಹಂಚಿಕೆ ಮಾಡುತ್ತಿರುತ್ತಾರೆ. ಸದರಿ ಪಡಿತರ ಚೀಟಿಗಳಿಗೆ ರಾಜ್ಯ ಸರ್ಕಾರದಿಂದ ಆಹಾರ ಸಹಾಯಧನ ಭರಿಸಲಾಗುತ್ತಿದೆ.

ಇ) ದಕ್ಷಿಣ ಕನ್ನಡ ಜಿಲ್ಲೆಯ ಬಿಪಿಎಲ್ ಕಾರ್ಡುದಾರರಿಗೆ ಆಹಾರಧಾನ್ಯ ವಿತರಣೆಗೆ ಪ್ರತೀ ಮಾಹೆಗೆ ಆಹಾರ ಸಹಾಯಧನ ಮತ್ತು ಸಾಗಾಣಿಕೆ ವೆಚ್ಚಕ್ಕಾಗಿ ಸರಾಸರಿ ರೂ. 142.00 ಲಕ್ಷಗಳು ಬಿಡುಗಡೆ ಮಾಡಲಾಗಿರುತ್ತದೆ. 2009–10ನೇ ಸಾಲಿನ ಫೆಬ್ರವರಿ 2010ರ ಅಂತ್ಯದವರೆಗೆ ಆಹಾರ ಸಹಾಯಧನ ಮತ್ತು ಸಾಗಾಣಿಕೆ ವೆಚ್ಚಕ್ಕಾಗಿ ರೂ.1627.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ.

ಪಡಿತರ ಚೀಟಿ ವಿತರಣೆ

998 (979) ಶ್ರೀ ಕಿಮ್ಮನೆ ರತ್ನಾಕರ್ (ತೀರ್ಥಹಳ್ಳಿ) : ಮಾನ್ಯ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು) :

ಅ) ತೀರ್ಥಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ದಿನಾಂಕ: 31–03–2008 ರವರೆಗೆ ವಿತರಿಸಲಾದ ಎಪಿಎಲ್ ಕರ್ಡುಗಳು ಮತ್ತು ಬಿಪಿಎಲ್ ಕಾರ್ಡುಗಳೆಷ್ಟು;

ಆ) ತೀರ್ಥಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ 2008 ಜುಲೈ ತಿಂಗಳಿನಿಂದ ಈವರೆಗೆ ವಿತರಿಸಲಾದ ಎಪಿಎಲ್ ಕಾರ್ಡುಗಳು ಮತ್ತು ಬಿಪಿಎಲ್ ಕಾರ್ಡುಗಳೆಷ್ಟು;

ಇ) ತೀರ್ಥಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ 2008 ಜುಲೈ ತಿಂಗಳಿನಿಂದ ವಿತರಿಸಲಾದ ಎರಡು ಬಗೆಯ ಕಾರ್ಡುಗಳಲ್ಲಿ ಆಯೋಜಿತ ನ್ಯೂನತೆಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಬಂದಿದ್ದಲ್ಲಿ ಯಾವ ಕಾರಣಕ್ಕೆ ಈವರೆಗೆ ಸರಿಪಡಿಸಲಾಗಿಲ್ಲ; ತಪ್ಪುಗಳನ್ನು ತಿದ್ದಲು ಅಡಚಣೆಯೇನು?

ಶ್ರೀ ಹೆಚ್. ಹಾಲಪ್ಪ (ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು) :

ಅ) ತೀರ್ಥಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ, ದಿನಾಂಕ: 31-03-2008 ರವರೆಗೆ, 6,378 ಎಎವೈ, 26,651 ಬಿಪಿಎಲ್ ಮತ್ತು 21,167 ಎಪಿಎಲ್ ಪಡಿತರ ಚೀಟಿಗಳನ್ನು ವಿತರಿಸಲಾಗಿದೆ.

ಆ) ತೀರ್ಥಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ, 2008 ಜುಲೈ ತಿಂಗಳಿನಿಂದ ಈವರೆಗೆ 3,966 ಬಿಪಿಎಲ್ ಮತ್ತು 457 ಎಪಿಎಲ್ ಪಡಿತರ ಚೀಟಿಗಳನ್ನು ವಿತರಿಸಲಾಗಿದೆ.

ಇ) ಇಲ್ಲ.

ಈ) ಅನ್ವಯಿಸುವುದಿಲ್ಲ.

ಪಡಿತರ ಚೀಟಿಗಳಲ್ಲಿ ಯಾವುದೇ ತಪ್ಪುಗಳಿದ್ದಲ್ಲಿ ತಾಲ್ಲೂಕು ಮಟ್ಟದ ಬ್ಯಾಕ್ ಆಫೀಸ್‌ಗಳಲ್ಲಿ ಅರ್ಜಿ ನೀಡಿ ತಿದ್ದುಪಡಿ ಮಾಡಲು ಅವಕಾಶ ನೀಡಲಾಗುತ್ತಿದೆ.

ತೋಟಗಾರಿಕೆ ಇಲಾಖೆ ವಿವರಣೆ

999 (980) ಶ್ರೀ ಕಿಮ್ಮನೆ ರತ್ನಾಕರ್ (ತೀರ್ಥಹಳ್ಳಿ) : ಮಾನ್ಯ ತೋಟಗಾರಿಕೆ ಮತ್ತು ಬಂಧಿಖಾನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗದಲ್ಲಿ ನೂತನವಾಗಿ ತೋಟಗಾರಿಕಾ ವಿಶ್ವವಿದ್ಯಾನಿಲಯ ಪ್ರಾರಂಭ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ;

ಆ) ತೀರ್ಥಹಳ್ಳಿ ಶೃಂಗೇರಿ ಮತ್ತು ಮೂಡಿಗೆರೆ ಅಡಿಕೆ ಸಂಶೋಧನಾ ಕೇಂದ್ರಗಳನ್ನು ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯಕ್ಕೆ ಅಥವಾ ನೂತನವಾಗಿ ಆರಂಭಿಸುವ ಶಿವಮೊಗ್ಗ ವಿಶ್ವವಿದ್ಯಾನಿಲಯಕ್ಕೆ ಬಾಗಲಕೋಟೆ ತೋಟಗಾರಿಕೆ ವಿಶ್ವವಿದ್ಯಾನಿಲಯದಿಂದ ಬೇರ್ಪಡಿಸಿ ಸೇರಿಸುವುದರಿಂದ ಆಗುವ ಅನಾನುಕೂಲತೆಗಳೇನು?

ಶ್ರೀ ಉಮೇಶ್ ವಿ. ಕತ್ತಿ (ತೋಟಗಾರಿಕೆ ಮತ್ತು ಬಂಧಿಖಾನೆ ಸಚಿವರು) :

ಅ) ಇಲ್ಲ.

ಆ)